ವೈದ್ಯಕೀಯ ವಿಭಾಗ 58/34 9/6/14 5 26

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಂಗವಿಕಲತೆ ನಿವಾರಣಾ ವೈದ್ಯಕೀಯ ಪರಿಹಾರ ನಿಧಿ ಯೋಜನೆಯಡಿ ನೀಡುತ್ತಿರುವ ಸಹಾಯಧನವನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ:ಮಮಇ 199 ಪಿಹೆಚ್‌ಪಿ 2008(5), ದಿನಾಂಕ: 15.9.2008.

2) ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಪತ್ರ ಸಂಖ್ಯೆ:ವಿಹಿನಾಸಇ:ಹೊಸ ಯೋಜನೆ:ವೈ.ಪ.ನಿಧಿ:24:2014-15:141, ದಿನಾಂಕ: 3.4.2014.

ಪ್ರಸ್ತಾವನೆ:

ಅಂಗವಿಕಲತೆ ನಿವಾರಣಾ ವೈದ್ಯಕೀಯ ಪರಿಹಾರ ನಿಧಿ ಯೋಜನೆಯಡಿ ಅಂಗವಿಕಲರು ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳಲು ರೂ.35,000/- ಗಳ ಸಹಾಯಧನವನ್ನು ನೀಡಲು ಮೇಲೆ ಕ್ರ.ಸಂ. (1) ರಲ್ಲಿ ಓದಲಾದ ದಿನಾಂಕ: 15.9.2008 ರ ಆದೇಶದಲ್ಲಿ ಮಂಜೂರಾತಿ ನೀಡಲಾಗಿತ್ತು.

2014-15ನೇ ಸಾಲಿನ ಆಯವ್ಯಯದಲ್ಲಿ ಶಸ್ತ್ರಚಿಕಿತ್ಸೆಯ ಮೂಲಕ ವಿಕಲಚೇತನತೆಯನ್ನು ನಿವಾರಣೆ ಮಾಡಲು ಹಾಲಿ ನೀಡುತ್ತಿರುವ ರೂ.35,000/- ಗಳ ಅನುದಾನವನ್ನು ರೂ.1.00 ಲಕ್ಷಗಳಿಗೆ ಹೆಚ್ಚಿಸಲು ಘೋಷಿಸಲಾಗಿದೆ. ಈ ಯೋಜನೆಯಡಿ ಶಸ್ತ್ರಚಿಕಿತ್ಸೆ ವೆಚ್ಚ, ಔಷಧಿ ವೆಚ್ಚ, ವೈದ್ಯಕೀಯ ಪರೀಕ್ಷೆಗಳ ವೆಚ್ಚ, ಬೆಡ್‌ಚಾರ್ಜ್‌ಗಳ ಮೊತ್ತ ಭರಿಸಲು ಹಾಲಿ ಇರುವ ರೂ.35,000/- ಗಳಿಂದ ಗರಿಷ್ಠ ರೂ.1.00 ಲಕ್ಷಗಳಿಗೆ ಹೆಚ್ಚಿಸಲು 2014-15ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 2235-02-101-0-99 ಯೋಜನೆ ಉಪ ಲೆಕ್ಕಶೀರ್ಷಿಕೆ 100 ರ ಧನಸಹಾಯ/ ಪರಿಹಾರ ನಿಧಿ ಅಡಿಯಲ್ಲಿ ರೂ.1012.50 ಲಕ್ಷಗಳ ಆಯವ್ಯಯದಲ್ಲಿ ವಿಕಲಚೇತನತೆಯನ್ನು ನಿವಾರಣೆ ಮಾಡಲು ವೈದ್ಯಕೀಯ ಪರಿಹಾರ ನಿಧಿಯನ್ನು ಒದಗಿಸುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಮೇಲೆ ಓದಲಾದ ಕ್ರ.ಸಂ.(2) ರ ದಿನಾಂಕ: 3.4.2014 ರ ಪತ್ರದಲ್ಲಿ ಕೋರಿರುತ್ತಾರೆ.

10/6/14

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 114 ಪಿಎಚ್‌ಪಿ 2014, ಬೆಂಗಳೂರು, ದಿನಾಂಕ: 7.6.2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಅಂಗವಿಕಲತೆ ನಿವಾರಣಾ ವೈದ್ಯಕೀಯ ಪರಿಹಾರ ನಿಧಿ ಯೋಜನೆಯಡಿ ಶಸ್ತ್ರಚಿಕಿತ್ಸೆಯ ಮೂಲಕ ವಿಕಲಚೇತನತೆಯನ್ನು ನಿವಾರಣೆ ಮಾಡಲು ಶಸ್ತ್ರಚಿಕಿತ್ಸೆ ವೆಚ್ಚ, ಔಷಧಿ ವೆಚ್ಚ, ವೈದ್ಯಕೀಯ ಪರೀಕ್ಷೆಗಳ ವೆಚ್ಚ, ಬೆಡ್‌ಚಾರ್ಜ್‌ಗಳನ್ನು

. . . . 2

336 9/6/14

ಭರಿಸಲು ಪ್ರಸ್ತುತ ನೀಡುತ್ತಿರುವ ರೂ.35,000/- ಗಳ ಅನುದಾನವನ್ನು ರೂ.1.00 ಲಕ್ಷಗಳಿಗೆ ಹೆಚ್ಚಿಸಲು ಸರ್ಕಾರದ ಮಂಜೂರಾತಿ ನೀಡಿದೆ.

ಈ ವೆಚ್ಚವನ್ನು ಲೆಕ್ಕಶೀರ್ಷಿಕೆ 2235-02-101-0-99 (ಯೋಜನೆ) ರಡಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆ, ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ. ಆಇ 349 ವೆಚ್ಚ-3/2014, ದಿನಾಂಕ: 27.5.2014 ಹಾಗೂ ಪಿಡಿ 15 ಐಎಂಎಂ 2014, ದಿನಾಂಕ: 29.5.2014 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ - 3 & 9).
6. ನಿರ್ದೇಶಕರು, ಯೋಜನಾ ಇಲಾಖೆ (ಪಿ.ಎಂ.ಐ. ವಿಭಾಗ).
7. ಎಲ್ಲಾ ಜಿಲ್ಲೆಯ ಉಪ ನಿರ್ದೇಶಕರು/ ಸಹಾಯಕ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ನಿರ್ದೇಶಕರ ಮುಖಾಂತರ).
8. ಎಲ್ಲಾ ಜಿಲ್ಲೆಯ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ನಿರ್ದೇಶಕರ ಮುಖಾಂತರ).
9. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
10. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.